**AUGUST 21, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

<><><>

**ಮುಖ್ಯಾಂಶಗಳು:**

- **ಡಿ. ದೇವರಾಜ ಅರಸುಅವರಿಗೆ ಮರಣೋತ್ತರ ಭಾರತರತ್ನ ಪ್ರಶಸ್ತಿ; ಕೇಂದ್ರಕ್ಕೆ ಶಿಫಾರಸು – ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ನಾಡಿನೆಲ್ಲೆಡೆ ಸದ್ಭಾವನಾ ದಿನ ಹಾಗೂ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಆಚರಣೆ**

- **ಆರ್ಟಿಕಲ್ 371ಜೆ ಕಾಯ್ದೆ ಜಾರಿಯಾಗಿ ದಶಕ ಪೂರ್ಣ: ಸಂಭ್ರಮಾಚರಣೆಗೆ ನಿರ್ಧಾರ– ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್.**

- **ಆಸ್ಪತ್ರೆಗಳಲ್ಲಿ ಭದ್ರತೆ ಹೆಚ್ಚಿಸುವಂತೆ ಕೇಂದ್ರ ಆರೋಗ್ಯಸಚಿವಾಲಯದಿಂದ ಸೂಚನೆ.**

<><><>

**ವಾರ್ತೆಗಳ ವಿವರ...**

<><><>

**ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸುಅವರಿಗೆ** ಮರಣೋತ್ತರವಾಗಿ ಭಾರತರತ್ನ ಪ್ರಶಸ್ತಿ ನೀಡುವಂತೆ ಕೇಂದ್ರಕ್ಕೆ ಶಿಫಾರಸು ಮಾಡಲಾಗುವುದು. ಜೊತೆಗೆ, ಎಲೆಕ್ಟ್ರಾನಿಕ್ ಸಿಟಿಗೆ ದೇವರಾಜ ಅರಸು ಎಲೆಕ್ಟ್ರಾನಿಕ್ ಸಿಟಿ ಎಂದು ನಾಮಕರಣ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. **ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು**ಅವರ 109ನೇ ಜನ್ಮ ದಿನಾಚರಣೆ ಅಂಗವಾಗಿ, ದೇವರಾಜ ಅರಸು ಅವರ ಪ್ರತಿಮೆಗೆ ಮಾಡಿ ಗೌರವನಮನ ಸಲ್ಲಿಸಿ ಅವರು ಮಾತನಾಡಿದರು. 1956 ನವಂಬರ್ 1ರಂದು ಕರ್ನಾಟಕ ಏಕೀಕರಣವಾಗಿದ್ದರೂ, 1973ರಲ್ಲಿ ದೇವರಾಜ ಅರಸು ಅವರು ಕರ್ನಾಟಕ ಎಂದು ನಾಮಕರಣ ಮಾಡಿದ್ದರು. ಈ ಹಿನ್ನೆಲೆಯಲ್ಲಿ 'ಕರ್ನಾಟಕ ಸಂಭ್ರಮ' ವರ್ಷಾಚರಣೆ ನಡೆಸುತ್ತಿದ್ದು, ನವಂಬರ್‌ನಲ್ಲಿ ಸಮಾರೋಪ ಸಮಾರಂಭ ನಡೆಯಲಿದೆ. ಈ ಸಂದರ್ಭದಲ್ಲಿ ಕನ್ನಡ ಭುವನೇಶ್ವರಿ ಪ್ರತಿಮೆಯನ್ನು ನವಂಬರ್ 1ರಂದು ವಿಧಾನಸೌಧದ ಮುಂಭಾಗದಲ್ಲಿ ಅನಾವರಣ ಮಾಡಲಾಗುವುದು ಎಂದು ಹೇಳಿದರು. ಅರಸು ಅವರು ಉಳುವವನೇ ಭೂಮಿಯ ಒಡೆಯ ಎಂದು ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ಮಾಡಿ, ಅಸಂಖ್ಯಾತ ಮಂದಿಗೆ ಭೂಮಿಯ ಮಾಲೀಕತ್ವ ನೀಡಿದರು. ಈ ಹಿನ್ನೆಲೆಯಲ್ಲಿ, ಪರಿಶಿಷ್ಟ ಸಮುದಾಯದ ಜನರ ಭೂಮಿಯ ಹಕ್ಕನ್ನು ಖಾತರಿಪಡಿಸಲು ಕಲಂ 79 ಎ ಮತ್ತು ಬಿ ಗೆ ಮಾಡಿರುವ ತಿದ್ದುಪಡಿಯನ್ನು ಮತ್ತೆ ಸರಿಪಡಿಸಲಾಗುವುದು ಎಂದು ಹೇಳಿದರು.

<><><>

**ಮಾಜಿ ಪ್ರಧಾನಮಂತ್ರಿ ದಿವಂಗತ ರಾಜೀವ ಗಾಂಧಿ ಅವರ ಜಯಂತಿ ಪ್ರಯುಕ್ತ** ನಿನ್ನೆ ರಾಜ್ಯದ ವಿವಿಧೆಡೆಗಳಲ್ಲಿ ಸದ್ಭಾವನಾ ದಿನಾಚರಣೆಯನ್ನು ಆಚರಿಸಲಾಯಿತು. ಈ ಹಿನ್ನೆಲೆ, ವಿಧಾನಸೌಧದಲ್ಲಿ ಜರುಗಿದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸದ್ಭಾವನಾ ದಿನಾಚರಣೆಯ ಪ್ರತಿಜ್ಞಾ ವಿಧಿ ಬೋಧಿಸಿದರು. ಈ ಸಂದರ್ಭ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಮಾಜಿ ಪ್ರಧಾನಮಂತ್ರಿ ರಾಜೀವ ಗಾಂಧಿಯವರು ದೇಶದಲ್ಲಿ ವಿಜ್ಞಾನ ಹಾಗೂ ತಂತ್ರಜ್ಞಾನದ ಬೆಳವಣಿಗೆಗೆ

ಕಾರಣೀಕರ್ತರು, ಸಾಮಾಜಿಕ ನ್ಯಾಯದ ಪರವಾಗಿದ್ದ ಅವರು ಎಲ್ಲರಿಗೂ ಸಮಾನ ಅವಕಾಶ ಸಿಗಬೇಕೆಂಬ ಭಾವನೆ ಹೊಂದಿದ್ದರು. ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳಾ ಪ್ರಾತಿನಿಧ್ಯಕ್ಕೆ ಒತ್ತು ನೀಡಿದ ಧೀಮಂತ ಎಂದು ಹೇಳಿದರು.

<><><>

**ಐ.ಟಿ. ಮತ್ತು ದೂರಸಂಪರ್ಕ ಕ್ಷೇತ್ರದಲ್ಲಿ ಮಾಜಿ ಪ್ರಧಾನಿ ರಾಜೀವ ಗಾಂಧಿ** ಅವರಿಂದ ಕ್ರಾಂತಿಕಾರಿ ನೀತಿ ಜಾರಿ ಪರಿಣಾಮ ದೇಶದಲ್ಲಿ ಇಂದು ಅಂಗೈಯಲ್ಲಿ ಆಡಳಿತ ನೋಡಲು ಸಾಧ್ಯವಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ಕಲಬುರಗಿಯಲ್ಲಿ ರಾಜೀವ ಗಾಂಧಿ ಪಂಚಾಯತ್ ರಾಜ್ ಫೆಲೋಶಿಪ್ ಕಾರ್ಯಕ್ರಮದ ಉದ್ಘಾಟನೆ ಹಾಗೂ ಯೋಜನೆಯ ಲೋಗೋ ಅನಾವರಣಗೊಳಿಸಿ ಅವರು ಮಾತನಾಡಿದರು. ಯುವ ಸಮೂಹದ ಮೇಲೆ ಅಪಾರ ನಂಬಿಕೆ ಹೊಂದಿದ್ದ ರಾಜೀವ ಗಾಂಧಿ ಅವರು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯುವಕರ ಪಾಲ್ಗೊಳ್ಳುವಿಕೆ ಹೆಚ್ಚಿಸುವ ನಿಟ್ಟಿನಲ್ಲಿ ಶ್ರಮಿಸಿದ್ದವರು. ದೇಶದಲ್ಲಿ 21 ವರ್ಷ ಮೀರಿದವರಿಗೆ ಇದ್ದ ಮತದಾನದ ಹಕ್ಕನ್ನು 18ಕ್ಕೆ ಇಳಿಸಿದ್ದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು. ಗ್ರಾಮೀಣ ಜನರ ಬದುಕು ಹಸನಾಗಬೇಕು. ಹಳ್ಳಿಯಿಂದ ದಿಲ್ಲಿವರೆಗೆ ನಾಯಕರನ್ನು ಬೆಳೆಸಬೇಕೆಂದು ಮತ್ತು ಅಧಿಕಾರ ವಿಕೇಂದ್ರಿಕರಣಕ್ಕಾಗಿ 1992ರಲ್ಲಿ ಸಂವಿಧಾನಕ್ಕೆ ತಿದ್ದುಪಡಿ ತಂದು ಪಂಚಾಯತ್ ರಾಜ್ಯ ವ್ಯವಸ್ಥೆ ಬಲಗೊಳಿಸಿದರು ಎಂದು ಸ್ಮರಿಸಿದರು.

<><><>

**ಶ್ರೀ ನಾರಾಯಣ ಗುರುಗಳು ಒಂದೇ ಜಾತಿ, ಒಂದೇ ಧರ್ಮ, ಒಂದೇ ದೇವರು** ಎಂದು ಪ್ರತಿಪಾದಿಸಿ ಸಮಾನತೆ ಎತ್ತಿ ಹಿಡಿದಿದ್ದು, ಅವರ ತತ್ವಾದರ್ಶಗಳನ್ನು ಎಲ್ಲರೂ ಪಾಲಿಸಬೇಕೆಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಬೋಸರಾಜು ಹೇಳಿದ್ದಾರೆ. ರಾಯಚೂರಿನಲ್ಲಿ ಬ್ರಹ್ಮ ಶ್ರೀ ನಾರಾಯಣ ಗುರು ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನಾರಾಯಣ ಗುರುಗಳ ಸಾಮಾಜಿಕ ಕಳಕಳಿ ಅನನ್ಯ. ಶ್ರೀಗಳು ಊರು, ಕುಟುಂಬ

ತ್ಯಜಿಸಿ ಶೋಷಿತರ ಏಳ್ಗೆಗೆ ಶ್ರಮಿಸಿದರು. ಜಾತಿವಾದ, ಮೂಢನಂಬಿಕೆ ವಿರುದ್ಧ ಹೋರಾಡಿದರು, ಅವರ ಮಾರ್ಗದರ್ಶನದಲ್ಲಿ ನಡೆಯಬೇಕು ಎಂದರು.

<><><>

**ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಬ್ರಹ್ಮಶ್ರೀ ನಾರಾಯಣಗುರು** ಜಯಂತಿ ಆಚರಿಸಿದ ವರದಿಗಳು ಬಂದಿವೆ.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಆರ್ಟಿಕಲ್ 371ಜೆ ಕಾಯ್ದೆ ಜಾರಿಯಾಗಿ** ದಶಕ ಪೂರ್ಣಗೊಂಡಿದ್ದು, ಸಂಭ್ರಮಾಚರಣೆ ಮಾಡಲು ನಿರ್ಧರಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ತಿಳಿಸಿದರು. ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 371ಜೆ ಪರಿಣಾಮವಾಗಿ ಕಳೆದ ಒಂದು ದಶಕದಲ್ಲಿ ಹಲವಾರು ಬದಲಾವಣೆಗಳು ಕಂಡು ಬಂದಿವೆ. 371 ಹಾಸಿಗೆಯ ಜಯದೇವ ಆಸ್ಪತ್ರೆ ಲೋಕಾರ್ಪಣೆಗೆ ಸಿದ್ಧವಾಗಿದ್ದು, ಮುಂದಿನ ದಿನಗಳಲ್ಲಿ ಇಂದಿರಾಗಾಂಧಿ ಮಕ್ಕಳ ಆಸ್ಪತ್ರೆ ಸ್ಥಾಪಿಸಲಾಗುವುದು. ಜಿಲ್ಲೆಯಲ್ಲಿ ಏರ್‌ಪೋರ್ಟ್, ಟ್ರಾಮಾ ಸೆಂಟರ್ ನಿರ್ಮಾಣ ಮಾಡಿದ್ದು, ಕಿದ್ವಾಯಿ ಆಸ್ಪತ್ರೆ ಕಟ್ಟಡ ಮತ್ತು ಟ್ಟ ವಿಸ್ತೀರ್ಣ ಮಾಡಲಾಗುವುದು. ಕಲಬುರ್ಗಿ ಸಾರ್ವಜನಿಕರಿಗೆ ಎಲ್ಲಾ ಬಗೆಯ ವೈದ್ಯಕೀಯ ಸೇವೆ ದೊರೆಯುವ ಜಿಲ್ಲೆಯಾಗಲಿದ್ದು, ಚಿಕಿತ್ಸೆಗಾಗಿ ಹೊರ ಜಿಲ್ಲೆ ಅಥವಾ ರಾಜ್ಯಗಳಿಗೆ ಹೋಗುವ ಅವಶ್ಯಕತೆಯಿಲ್ಲ ಎಂದರು. ತುಂಗಭದ್ರಾ ಜಲಾಶಯದಲ್ಲಿ ಕಳಚಿಬಿದ್ದ 19ನೇ ಕ್ರಸ್ಟ್ ಗೇಟ್ ಯಶಸ್ವಿಯಾಗಿ ಬದಲಾಯಿಸಲಾಗಿದೆ ಎಂದು ಮಾಹಿತಿ ನೀಡಿದರು.

<><><>

**ವಿಜಯಪುರ ಜಿಲ್ಲೆಯಲ್ಲಿ 5 ಲಕ್ಷ 9 ನೂರಾ 16 ಪಡಿತರಚೀಟಿ** ಹೊಂದಿರುವ ಕುಟುಂಬಗಳಿವೆ. ಇದರಲ್ಲಿ 4 ಲಕ್ಷದ 58 ಸಾವಿರದ 5 ನೂರಾ 59 ಬಿಪಿಎಲ್ ಕುಟುಂಬಗಳು ಹಾಗೂ 41 ಸಾವಿರದ 357 ಅಂತ್ಯೋದಯ ಅನ್ನ ಯೋಜನೆಯ ಪಡಿತರ ಚೀಟಿ ಹೊಂದಿರುವ ಕುಟುಂಬಗಳಿವೆ. ಬಿಪಿಎಲ್ ಅರ್ಹತಾ ಮಾನದಂಡಗಳಿಂದ ಹೊರತಾಗಿ ಪಡಿತರ ಚೀಟಿಗಳನ್ನು ಹೊಂದಿರುವ ಜನರು ತಾವೇ ಮುಂದೆ ಬಂದು ತಮ್ಮ ಪಡಿತರ ಚೀಟಿಗಳನ್ನು ಇಲಾಖೆಗೆ ಒಪ್ಪಿಸಿ ಬದಲಿ ಪಡಿತರ ಚೀಟಿಗಳನ್ನು ಪಡೆಯಬೇಕು ಎಂದು ವಿಜಯಪುರ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಉಪ ನಿರ್ದೇಶಕ ವಿನಯ ಕುಮಾರ್ ಪಾಟೀಲ್ ಆಕಾಶವಾಣಿ ಮೂಲಕ ವಿನಂತಿಸಿಕೊಂಡಿದ್ದಾರೆ.

<><><>

**ಸರ್ಕಾರದ ಆದೇಶದಂತೆ ಯಾದಗಿರಿ ಜಿಲ್ಲೆಯಲ್ಲಿ ಅನರ್ಹ ಬಿಪಿಎಲ್ ಪಡಿತರ** ಚೀಟಿಗಳನ್ನು ಪತ್ತೆ ಹಚ್ಚಿ ರದ್ದುಪಡಿಸುವ ಅಭಿಯಾನ ಪ್ರಾರಂಭಿಸಲಾಗಿದೆ ಎಂದು ಯಾದಗಿರಿ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪ ನಿರ್ದೇಶಕ ಅನಿಲ್ ಕುಮಾರ್ ಢವಳಗಿ ತಿಳಿಸಿದ್ದಾರೆ.

<><><>

**ಕರ್ನಾಟಕ ಅತಿ ಹೆಚ್ಚು ಎಲೆಕ್ಟ್ರಿಕ್ ವಾಹನಗಳ ಚಾರ್ಜಿಂಗ್ ಕೇಂದ್ರಗಳಿರುವ** ರಾಜ್ಯವಾಗಿದ್ದು, ದೇಶದಲ್ಲಿಯೇ ಮೊದಲ ಸ್ಥಾನದಲ್ಲಿದೆ ಎಂದು ಇಂಧನ ಖಾತೆ ಸಚಿವ ಕೆ.ಜೆ ಜಾರ್ಜ್ ಹೇಳಿದ್ದಾರೆ. ಎಕ್ಸ್ ಖಾತೆಯಲ್ಲಿ ಈ ವಿಷಯ ಹಂಚಿಕೊಂಡಿರುವ ಅವರು; ಬ್ಯೂರೋ ಆಫ್ ಎನರ್ಜಿ ಎಫಿಶಿಯನ್ಸಿ ವರದಿ ಪ್ರಕಾರ ರಾಜ್ಯದಲ್ಲಿ ಒಟ್ಟು 5 ಸಾವಿರದ 765 ಎಲೆಕ್ಟ್ರಿಕ್ ವಾಹನ ಚಾರ್ಜಿಂಗ್ ಕೇಂದ್ರಗಳಿವೆ. ಇವಿ ವಾಹನಗಳ ಬಳಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಜ್ಯದ ಬದ್ಧತೆಯನ್ನು ಈ ಸಾಧನೆ ಎತ್ತಿ ತೋರಿಸುತ್ತದೆ. ಜೊತೆಗೆ ರಾಜ್ಯದ ಇ.ವಿ ನೀತಿಯು ಇ.ವಿ ಬಳಕೆದಾರರು ಹಾಗೂ ವಾಹನ ಉತ್ಪಾದಕರಿಗೆ ಪೂರಕವಾಗಿದೆ ಎಂದೂ ಅವರು ತಿಳಿಸಿದ್ದಾರೆ.

<><><>

**ಕೇಂದ್ರ ಸರ್ಕಾರದಲ್ಲಿನ ವಿವಿಧ ಹುದ್ದೆಗಳಿಗೆ** ಲ್ಯಾಟರಲ್ ಎಂಟ್ರಿ ನೇಮಕಾತಿ ಮಾಡಿಕೊಳ್ಳುವುದಕ್ಕಾಗಿ ಕೇಂದ್ರ ಲೋಕಸೇವಾ ಆಯೋಗ ಹೊರಡಿಸಿದ್ದ ಜಾಹೀರಾತನ್ನು ರದ್ದುಗೊಳಿಸುವಂತೆ ಕೇಂದ್ರ ಸರ್ಕಾರ, ಆಯೋಗಕ್ಕೆ ಸೂಚಿಸಿದೆ. ಆಯೋಗ ತನ್ನ ಆಡಳಿತಾತ್ಮಕ ಹುದ್ದೆಗಳಿಗೆ ಸಾಂಪ್ರದಾಯಿಕ ಸರ್ಕಾರಿ ಸೇವಾ ಕೇಡರ್ ಹೊರತುಪಡಿಸಿ ಇತರ ವ್ಯಕ್ತಿಗಳನ್ನು ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಇದಾಗಿದೆ. 24 ಸಚಿವಾಲಯಗಳ ಜಂಟಿ ಕಾರ್ಯದರ್ಶಿ, ನಿರ್ದೇಶಕರು ಮತ್ತು ಉಪ ಕಾರ್ಯದರ್ಶಿ ಸೇರಿದಂತೆ ಒಟ್ಟು 45 ಹುದ್ದೆಗಳಿಗೆ ನೇಮಕಾತಿಗೆ ಆಯೋಗ ಮುಂದಾಗಿತ್ತು. ಈ ಸಂಬಂಧ ಅರ್ಜಿ ಹೊರಡಿಸಿತ್ತು. ಆದರೆ ಪ್ರಧಾನಿ ನರೇಂದ್ರ ಮೋದಿ ಅವರ ನಿರ್ದೇಶನದ ಮೇರೆಗೆ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಕೇಂದ್ರ ಲೋಕಸೇವಾ ಆಯೋಗಕ್ಕೆ ಇದನ್ನು ರದ್ದುಗೊಳಿಸುವಂತೆ ಪತ್ರ ಬರೆದಿದ್ದಾರೆ. ಲ್ಯಾಟರಲ್ ಎಂಟ್ರಿ ಮೂಲಕ ಪ್ರವೇಶ ಪಡೆದ ಅಭ್ಯರ್ಥಿಗಳನ್ನು ಸಾಮಾನ್ಯವಾಗಿ ಮೂರರಿಂದ ಐದು ವ ರ್ಗಳ ಅವಧಿಯ ಗುತ್ತಿಗೆ ಆಧಾರದಲ್ಲಿ ನೇಮಕ ಮಾಡಲಾಗುತ್ತದೆ.

<><><>

**ಆಸ್ಪತ್ರೆಗಳಲ್ಲಿ ಭದ್ರತೆ ಹೆಚ್ಚಿಸುವಂತೆ ಕೇಂದ್ರ ಆರೋಗ್ಯಸಚಿವಾಲಯ ಕೇಂದ್ರ ಸರ್ಕಾರಿ** ಆಸ್ಪತ್ರೆಗಳು ಮತ್ತು ಸಂಸ್ಥೆಗಳ ಮುಖ್ಯಸ್ಥರಿಗೆ ಪತ್ರ ಬರೆದಿದೆ. ಪ್ರವೇಶ ದ್ವಾರ, ನಿರ್ಗಮನ, ಕಾರಿಡಾರ್, ಡಾರ್ಕ್ ಸ್ಪಾಟ್, ಸೂಕ್ಷ್ಮ ಪ್ರದೇಶಗಳು ಸೇರಿದಂತೆ ಆಯಕಟ್ಟಿನ ಸ್ಥಳಗಳಲ್ಲಿ ಸಾಕಷ್ಟು ಸಂಖ್ಯೆಯ ಸಿಸಿಟಿವಿ ಕ್ಯಾಮೆರಾ ಸ್ಥಾಪಿಸಬೇಕು. ನಿಯಂತ್ರಣ ಕೊಠಡಿ ತೆರೆಯಬೇಕು. ಆಸ್ಪತ್ರೆಗಳ ಆವರಣದಲ್ಲಿ ಸರಿಯಾದ ಮೇಲ್ವಿಚಾರಣೆ, ಗಸ್ತು, ಕಣ್ಗಾವಲಿಗಾಗಿ ಸಾಕಷ್ಟು ಸಂಖ್ಯೆಯ ಸುಶಿಕ್ಷಿತ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಸಚಿವಾಲಯ ಪತ್ರದಲ್ಲಿ ಹೇಳಿದೆ.

<><><>

**ಮಂಕಿಪಾಕ್ಸ್ ಸೋಂಕಿನ ಬಗ್ಗೆ ರಾಜ್ಯದ ಜನರು ಗಾಬರಿ, ಆತಂಕಪಡುವ ಅಗತ್ಯವಿಲ್ಲ** ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು; ಈವರೆಗೆ ದೇಶದಲ್ಲಿ ಒಂದೇ ಒಂದು ಮಂಕಿಪಾಕ್ಸ್ ಪ್ರಕರಣ ಪತ್ತೆಯಾಗಿಲ್ಲ. ಆದರೂ ರಾಜ್ಯ ಸರ್ಕಾರದಿಂದ ಈಗಾಗಲೇ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು

ತೆಗೆದುಕೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕೇಂದ್ರದಿಂದ ಅಧಿಕೃತ ಮಾರ್ಗಸೂಚಿ ಬರದೇ ಇದ್ದರೂ ರಾಜ್ಯ ಆರೋಗ್ಯ ಇಲಾಖೆಯಿಂದ ಜಿಲ್ಲಾ ಆರೋಗ್ಯ ಕೇಂದ್ರಗಳವರೆಗೂ ಮುನ್ನೆಚ್ಚರಿಕೆ ನೀಡಲಾಗಿದೆ. ನಾಡಿನ ಜನರು ಗಾಬರಿಪಡುವ ಅವಶ್ಯಕತೆ ಇಲ್ಲ ಎಂದು ಅವರು ಹೇಳಿದ್ದಾರೆ.

<><><>

**ಇಂದು ವಿಶ್ವ ಹಿರಿ ನಾಗರಿಕರ ದಿನ. ಪ್ರತಿ ವರ್ಷ ಆಗಸ್ಟ್ 21 ರಂದು ವಿಶ್ವ ಹಿರಿಯ** ನಾಗರಿಕರ ದಿನವನ್ನು ಆಚರಿಸಲಾಗುತ್ತದೆ. ಇಳಿ ವಯಸ್ಸಿನ ನಾಗರಿಕರ ಸಾಮಾಜಿಕ ಕೊಡುಗೆಗಳನ್ನು ಸ್ಮರಿಸುವುದು, ಆರೋಗ್ಯ ಕಾಳಜಿ ವಹಿಸುವುದು, ಅವರು ಎದುರಿಸುವ ಸಮಸ್ಯೆಗಳು ಹಾಗೂ ದೌರ್ಜನ್ಯಗಳ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶವನ್ನು ಈ ದಿನ ಹೊಂದಿದೆ.

<><><>

**ನಾಡಹಬ್ಬ ದಸರಾ ಮಹೋತ್ಸವಕ್ಕೆ ಮುನ್ನುಡಿ**ಬರೆಯುವ ಗಜಪಯಣಕ್ಕೆ ಇಂದು ಹುಣಸೂರು ತಾಲೂಕಿನ ವೀರನಹೊಸಳ್ಳಿಯಲ್ಲಿ ಚಾಲನೆ ದೊರೆಯಲಿದೆ. ಅಂಬಾರಿ ಆನೆ ಅಭಿಮನ್ಯು ನೇತೃತ್ವದ 9 ಆನೆಗಳ ಮೊದಲ ತಂಡಕ್ಕೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಚ್.ಸಿ ಮಹದೇವಪ್ಪ ಹಾಗೂ ಅರಣ್ಯ ಖಾತೆ ಸಚಿವ ಈಶ್ವರ ಖಂಡ್ರೆ ಪೂಜೆ ಸಲ್ಲಿಸಿ ಬೀಳ್ಕೊಡಲಿದ್ದಾರೆ.

<><><>

**ಕಳೆದ ಕೆಲ ದಿನಗಳಿಂದ ರಾಜ್ಯದ**ವಿವಿಧೆಡೆಗಳಲ್ಲಿ ಸುರಿಯುತ್ತಿರುವ ಮಳೆ ಇಂದು ಮುಂದುವರೆಯಲಿದೆ. ರಾಜ್ಯದ ಒಳನಾಡು ಪ್ರದೇಶಗಳಲ್ಲಿ ಗುರುವಾರದಿಂದ ವರ್ಷಧಾರೆ ಕಡಿಮೆಯಾಗಲಿದೆ. ಕರಾವಳಿ ಜಿಲ್ಲೆಗಳಲ್ಲಿ ಮಾತ್ರ 3–4 ದಿನ ಹೆಚ್ಚು ಮಳೆ ಸುರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

<><><>

**ಆಲಮಟ್ಟಿ ಜಲಾಶಯ ಭರ್ತಿ ಹಿನ್ನೆಲೆ; ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು** ಬಾಗಲಕೋಟೆಯಲ್ಲಿ ಗಂಗಾ ಪೂಜೆ ಹಾಗೂ ಬಾಗಿನ ಅರ್ಪಿಸಲಿದ್ದಾರೆ.

<><><><><><>